ಜಿಲ್ಲಾ ಪಂಚಾಯತ್, ಮಂಡ್ಯ

ಕೃಷಿ ಇಲಾಖೆ, ಮಂಡ್ಯ

# ಕೃಷಿ ಇಲಾಖೆಯಿಂದ ರೈತರಿಗೆ ದೊರೆಯುವ ಸೌಲಭ್ಯಗಳ ಸಂಕ್ಷಿಪ್ತ ಮಾಹಿತಿ

| ಕ್ರ. ಸಂ. | ಯೋಜನೆ | ದೊರೆಯುವ ಸೌಲಭ್ಯ |
|---|---|---|
| 1. | ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ | ಈ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಕೇಂದ್ರ ಸರ್ಕಾರದಿಂದ ತಲಾ ರೂ. 2000/-ರಂತೆ 3 ಸಮಾನ ಕಂತುಗಳಲ್ಲಿ ಒಟ್ಟು ವಾರ್ಷಿಕ ರೂ. 6000/- ಆರ್ಥಿಕ ನೆರವು ಹಾಗೂ ರಾಜ್ಯ ಸರ್ಕಾರದಿಂದ ತಲಾ ರೂ. 2000/-ರಂತೆ 2 ಸಮಾನ ಕಂತುಗಳಲ್ಲಿ ಒಟ್ಟು ವಾರ್ಷಿಕ ರೂ. 4000/- ಆರ್ಥಿಕ ನೀಡಲಾಗುವುದು. |
| 2 | ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ | ಪ್ರಕೃತಿ ವಿಕೋಪ ಹಾಗೂ ಕೀಟರೋಗ ಬಾಧೆಯಿಂದ ಬೆಳೆ ನಷ್ಟ ಸಂಭವಿಸಿದರೆ ರೈತರಿಗೆ ಪರಿಹಾರ ನೀಡುವ ಮೂಲಕ ಭದ್ರತೆ ಒದಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಬೆಳೆ ಸಾಲ ಪಡೆದ ರೈತರಿಗೆ ಬೆಳೆ ವಿಮೆಯು ಕಡ್ಡಾಯವಾಗಿರುತ್ತದೆ. ಸಾಲ ಪಡೆಯದ ರೈತರು ಅಧಿಸೂಚಿತ ಘಟಕದಡಿ ಅಧಿಸೂಚಿತ ಬೆಳೆಗಳಿಗೆ ನಿಗದಿತ ಅವಧಿಯೊಳಗೆ ಪ್ರೀಮಿಯಂ ಮೊತ್ತ ಪಾವತಿಸಿ ವಿಮೆ ಮಾಡಿಸಬಹುದಾಗಿರುತ್ತದೆ. |
| 3 | ಕೃಷಿ ಯಾಂತ್ರೀಕರಣ ಯೋಜನೆ | ಕಾರ್ಮಿಕರ ಸಮಸ್ಯೆಯನ್ನು ನೀಗಿಸಿ, ಕೃಷಿ ಚಟುವಟಿಕೆಗಳ ಶ್ರಮದಾಯಕ ದುಡಿಮೆಯನ್ನು ತಗ್ಗಿಸಿ, ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಈ ಯೋಜನೆಯಡಿ ಸಾಮಾನ್ಯ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ಗರಿಷ್ಟ 1.0 ಲಕ್ಷ ಸಹಾಯಧನವನ್ನು ಮಿತಿಗೊಳಿಸಲಾಗಿದೆ. ಉಳುಮೆಯಿಂದ ಕೊಯ್ಲುವರೆಗೆ ಉಪಯುಕ್ತವಿರುವ ಕೃಷಿ ಯಂತ್ರೋಪಕರಣಗಳನ್ನು ಸಹಾಯಧನದಲ್ಲಿ ವಿತರಿಸಲಾಗುವುದು. |
| 4 | ಕೃಷಿ ಯಂತ್ರಧಾರೆ | ರೈತರಿಗೆ ಸಕಾಲದಲ್ಲಿ ಮತ್ತು ಕಡಿಮೆ ಬಾಡಿಗೆ ದರದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಒದಗಿಸಲು ಜಿಲ್ಲೆಯಲ್ಲಿ ಒಟ್ಟು 31 ಸಂಖ್ಯೆಯ ಕೃಷಿ ಯಂತ್ರಧಾರೆ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಕೇಂದ್ರಗಳಲ್ಲಿ ಕಡಿಮೆ ಬಾಡಿಗೆ ದರದಲ್ಲಿ ವಿವಿಧ ಕೃಷಿ ಯಂತ್ರೋಪಕರಣಗಳನ್ನು ಪಡೆಯಬಹುದಾಗಿದೆ |
| 5 | ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಸೂಕ್ಷ್ಮ ನೀರಾವರಿ | ನೀರಿನ ಸಮರ್ಥ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ತುಂತುರು ನೀರಾವರಿ ಘಟಕ ಹಾಗೂ ಹನಿ ನೀರಾವರಿ ಘಟಕಗಳಿಗೆ ಶೇ. 90ರ ಸಹಾಯಧನವನ್ನು ಒದಗಿಸಲಾಗುವುದು. |
| 6 | ಕೃಷಿ ಭಾಗ್ಯ | ಮಳೆ ನೀರಿನ ಸಮರ್ಥ ಬಳಕೆ ಮತ್ತು ಸಂರಕ್ಷಿತ ನೀರಾವರಿಗೆ, ತನ್ಮೂಲಕ ಸುಧಾರಿತ ಬೆಳೆ ಉತ್ಪಾದನಾ ಪದ್ಧತಿ ಅಳವಡಿಸಲು ರೈತರನ್ನು ಪ್ರೋತ್ಸಾಹಿಸಲು ಈ ಯೋಜನೆಯಡಿ ಪ್ಯಾಕೇಜ್ ರೂಪದಲ್ಲಿ ಕೃಷಿ ಹೊಂಡ, ಪಾಲಿಥೀನ್ ಹೊದಿಕೆ, ಡೀಸೆಲ್ ಪಂಪ್‌ಸೆಟ್, ಲಘು ನೀರಾವರಿ ಘಟಕ, ಕೃಷಿ ಹೊಂಡದ ಸುತ್ತಲು ನೆರಳು ಪರದೆ ಘಟಕಗಳಿಗೆ ಸಹಾಯಧನ ವಿತರಿಸಲಾಗುವುದು. |
| 7 | ಬೀಜಗಳ ಪೂರೈಕೆ ಯೋಜನೆ | ಪ್ರಮಾಣಿತ ಹಾಗೂ ಉತ್ತಮ ಗುಣಮಟ್ಟದ ಬಿತ್ತನೆ ಬೀಜವನ್ನು ಸಾಮಾನ್ಯ ವರ್ಗ ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ರೈತರಿಗೆ ಕ್ರಮವಾಗಿ ಶೇ. 50 ಮತ್ತು ಶೇ. 75ರ ಸಹಾಯಧನದಲ್ಲಿ ಒದಗಿಸಲಾಗುವುದು |
| 8 | ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆ | ಮಣ್ಣಿನಲ್ಲಿನ ಲಘುಪೋಷಕಾಂಶಗಳ ಕೊರತೆಯನ್ನು ನೀಗಿಸಲು ಹಸಿರೆಲೆ ಗೊಬ್ಬರ ಬೀಜಗಳು, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು ಮತ್ತು ಸಾವಯವ ಗೊಬ್ಬರ ಪರಿಕರಗಳನ್ನು ಸಾಮಾನ್ಯ ವರ್ಗ ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ರೈತರಿಗೆ ಕ್ರಮವಾಗಿ ಶೇ. 50 ಮತ್ತು ಶೇ. 75ರ ಸಹಾಯಧನದಲ್ಲಿ ಒದಗಿಸಲಾಗುವುದು. ಎರೆಹುಳು ಗೊಬ್ಬರ ಘಟಕ ಮತ್ತು ಬಯೋಡೈಜೆಸ್ಟರ್ ಘಟಕಗಳಿಗೆ ಸಹಾಯಧನ ಒದಗಿಸಲಾಗುವುದು. |
| 9 | ಪ್ರಧಾನ ಮಂತ್ರಿ ಕಿಸಾನ್ ಮಾನ್ ಧನ್ ಯೋಜನೆ | 18-40 ವರ್ಷದೊಳಗಿನ ಸಣ್ಣ ಮತ್ತು ಅತಿ ಸಣ್ಣ ರೈತರು ತಮ್ಮ ವ್ಯಾಪ್ತಿಯ ನಾಗರೀಕ ಸೇವಾ ಕೇಂದ್ರಗಳಲ್ಲಿ ಈ ಯೋಜನೆಗೆ ನೋಂದಾಯಿಸಬಹುದಾಗಿದೆ. ಆಸಕ್ತ ರೈತರು ಮಾಸಿಕ ಪಿಂಚಣಿ ವಂತಿಕೆ ಪಾವತಿಸಿ, 60 ವರ್ಷ ತುಂಬಿದ ನಂತರ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. |

**ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಗಳು ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಂಪರ್ಕಿಸಲು ಕೋರಿದೆ**

* * * * * * * *

**ಪ್ರಕಟಣೆ: ಜಂಟಿ ಕೃಷಿ ನಿರ್ದೇಶಕರು, ಮಂಡ್ಯ ಜಿಲ್ಲೆ, ಮಂಡ್ಯ**

Dayanand R
NIC